ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ವಿಶೇಷ ಭತ್ಯೆ ಬಗ್ಗೆ

ಡಾ|| ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):-

559(714) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲಾ ಮುಖ್ಯೋಪಾಧ್ಯಾಯರು ಎಕ್ಸ್‌ಗ್ರೇಷಿಯದಿಂದ ವಿಶೇಷ ಭತ್ಯೆ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾರಣಗಳೇನು;

(ಆ) ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರು ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ ಅನ್ವಯಿಸುವ ವಿಶೇಷ ಭತ್ಯೆ ಪ್ರೌಢಶಾಲಾ ಮುಖ್ಯೋಪಾಧ್ಯಾಯರಿಗೆ ಅನ್ವಯಿಸುವುದಿಲ್ಲವೆ;

(ಇ) ಈ ವಿಶೇಷ ಭತ್ಯೆ ನೀಡಿಕೆಯಿಂದ ಸರ್ಕಾರಕ್ಕೆ ಆಗುವ ಆರ್ಥಿಕ ವೆಚ್ಚ ಎಷ್ಟು;

(ಈ) ಯಾವ ಕಾಲಮಿತಿಯೊಳಗೆ ಈ ವಿಶೇಷ ಭತ್ಯೆಯನ್ನು ನೀಡಲಾಗುವುದು?